ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕ್ರಮ ಕೈಗೊಳ್ಳುವರೆ?

ಶ್ರೀ ಅನಂತನಾಗ್ (ಬೆಂಗಳೂರು ನಗರಾಭಿವೃದ್ಧಿ ರಾಜ್ಯ ಸಚಿವರು):

ಅ) ಬಂದಿದೆ. ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಕಳೆದ ಎರಡು ತಿಂಗಳಿನಿಂದ ಈ ಪ್ರದೇಶದಲ್ಲಿ 63 ಬೀದಿ ನಾಯಿಗಳನ್ನು ಹಿಡಿಯಲಾಗಿದೆ.

ಇ) ಹೌದು.

ಈ) ಈ ರೀತಿ ಹಸುಗಳನ್ನು ಬೀದಿ ಬದಿಯ ವಿದ್ಯುತ್, ದೂರವಾಣಿ ಕಂಬಗಳಿಗೆ ಮತ್ತು ಬೋರ್‌ವೆಲ್‌ಗಳಿಗೆ ಕಟ್ಟದಿರಲು ತಿಳುವಳಿಕೆ ನೀಡಲಾಗಿದೆ. ಕಳೆದೆರಡು ತಿಂಗಳಲ್ಲಿ ಈ ರೀತಿ ಕಟ್ಟಿದ 34 ಜಾನುವಾರುಗಳನ್ನು ಹಿಡಿದು ದೊಡ್ಡಿಗೆ ಸಾಗಿಸಲಾಗಿದೆ.

ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ನಬಾರ್ಡ್‌ನಿಂದ ಹಣ

3021:(3956)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ) ಮಾನ್ಯ ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಯಲು ಸೀಮೆ ಅಭಿವೃದ್ಧಿ ಮಂಡಳಿಗೆ ಈ ವರ್ಷ ಮೀಸಲಿಡಲಾದ ಹಣ ಎಷ್ಟು;

ಆ) ಈ ಮಂಡಳಿಯ ವ್ಯಾಪ್ತಿಗೆ ಒಳಪಡುವ ತಾಲ್ಲೂಕುಗಳೆಷ್ಟು?

ಇ) ಒಂದೊಂದು ತಾಲ್ಲೂಕಿಗೆ ಮೀಸಲಿಡಲಾದ ಹಣ ಎಷ್ಟು?

ಈ) ಬಯಲುಸೀಮೆ ಅಭಿವೃದ್ಧಿಮಂಡಳಿಗೆ ನಬಾರ್ಡ್‌ನಿಂದ ನೆರವು ಪಡೆಯುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಕೆ.ವೆಂಕಟೇಶ್ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು):

ಅ) 1998-99ನೇ ಸಾಲಿನ ಸಾಮಾನ್ಯ ಕಾರ್ಯಕ್ರಮದಡಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ರೂ.850-00 ಲಕ್ಷರೂಗಳನ್ನು ಮೀಸಲಾಗಿಡಲಾಗಿದೆ.

ಆ) ರಾಜ್ಯದ ಎಂಟು ಜಿಲ್ಲೆಗಳಲ್ಲಿನ 57 ತಾಲ್ಲೂಕುಗಳು ಈ ಮಂಡಳಿಯ ವ್ಯಾಪ್ತಿಗೆ ಒಳಪಡುತ್ತವೆ.

ಇ) 1998-99ನೇ ಸಾಲಿನಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 9.60ಲಕ್ಷರೂಗಳನ್ನು ಮೀಸಲಾಗಿಡಲಾಗಿದೆ.

ಈ) ನಬಾರ್ಡ್ ಮೂಲಕ ಆರ್ಥಿಕ ನೆರವನ್ನು ಪಡೆಯಲು ಮಂಡಳಿಯ ಸರ್ವಸದಸ್ಯರ ಸಭೆಯಲ್ಲಿ ತೀರ್ಮಾನಿಸಿದ್ದು ಈ ವಿಷಯವನ್ನು ಪರಿಶೀಲಿಸಲಾಗುತ್ತಿದೆ.

ರಾಜ್ಯದಲ್ಲಿ ಹಸಿರು ಕಾರ್ಡ್ ಹಂಚಿಕೆ

3022:(3955)

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ): ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹಸಿರು ಕಾರ್ಡು ವಿತರಿಸುವ ಯೋಜನೆಯನ್ನು ಜಾರಿ ಮಾಡಿ ಕಾರ್ಡ್‌ಗಳನ್ನು ಹಂಚಲಾಗಿದೆಯೆ?

ಆ) ಹಾಗಿದ್ದಲ್ಲಿ ಅದಕ್ಕೆ ಕಾರಣಗಳೇನು?

ಇ) ಹಸಿರು ಕಾರ್ಡ್ ಹಂಚಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಜಿ.ಬಸವಣ್ಣಪ್ಪ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು):

ಅ) ಹೌದು.

ಆ) ಉದ್ಭವಿಸುವುದಿಲ್ಲ.

ಇ) ಸರ್ಕಾರ ಘೋಷಿಸಿದಂತೆ ಸಾರ್ವಜನಿಕರಿಂದ ಸ್ವೀಕರಿಸಲಾದ ಅರ್ಜಿಗಳನ್ನು ಇಲಾಖೆಯ ಮೂಲಕ ಪರಿಶೀಲಿಸಿ ಅರ್ಹರನ್ನೇ ಗುರುತಿಸಿ ಹಸಿರು ಪಡಿತರ ಚೀಟಿ ವಿತರಿಸಲಾಗುತ್ತಿದೆ. ಪಡಿತರ ಚೀಟಿ ವಿತರಣಾ ಪ್ರಕ್ರಿಯೆ ಪ್ರಾರಂಭಗೊಂಡಿದ್ದು ದಿನಾಂಕ 30.11.98ರ ಒಳಗಾಗಿ ಅರ್ಹರಿಗೆಲ್ಲಾ ಪಡಿತರ ಚೀಟಿ ವಿತರಿಸಲು ಗುರಿ ನಿಗಧಿಪಡಿಸಿ ಪಡಿತರ ಚೀಟಿಗಳನ್ನು ಹಂಚಲಾಗುತ್ತಿದೆ.